<u>**ಕರ್ನಾಟಕ ಸರ್ಕಾರದ ನಡವಳಿಗಳು**</u>

ವಿಷಯ: ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕವನ್ನು ಕರ್ನಾಟಕ ಪರೀಕ್ಷೆಗಳ ಪ್ರಾಧಿಕಾರ ಎಂಬ ಹೆಸರಿನಲ್ಲಿ ನೋಂದಾಯಿತ ಸೊಸೈಟಿಯಾಗಿ ಪರಿವರ್ತಿಸುವ ಕುರಿತು ಆದೇಶ.

- - - -

**ಓದಲಾಗಿದೆ:**

ಸರ್ಕಾರದ ಆದೇಶ ಸಂಖ್ಯೆ:ಇಡಿ 212 ಟಿಇಸಿ 2006, ದಿನಾಂಕ:20-12-2006.

**ಪ್ರಸ್ತಾವನೆ:**

ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕವು (ಸಿ.ಇ.ಟಿ ಸೆಲ್) ಕಳೆದ 12 ವರ್ಷಗಳಿಂದ ಕಾರ್ಯನಿರ್ವಹಿಸುತ್ತಾ ಬಂದಿದೆ. ಘಟಕವು ತನ್ನ ದಕ್ಷತೆ, ಪಾರದರ್ಶಕತೆ ಮತ್ತು ವಿಶ್ವಾಸರ್ಹತೆಯಿಂದ ಉತ್ತಮ ಹೆಸರನ್ನು ಗಳಿಸಿರುತ್ತದೆ. ಪ್ರಸ್ತುತ ಸದರಿ ಘಟಕಕ್ಕೆ ಹಂಚಿಕೆ ಮಾಡಲಾಗಿರುವ ಏಕೈಕ ಕೆಲಸವೆಂದರೆ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಏರ್ಪಡಿಸುವುದು ಹಾಗೂ ಯಶಸ್ವಿ ಅಭ್ಯರ್ಥಿಗಳಿಗೆ ಸರ್ಕಾರವು ನಿಗದಿಪಡಿಸುವ ಸೀಟ್-ಮ್ಯಾಟ್ರಿಕ್ಸ್ ನ ಆಧಾರದ ಮೇಲೆ ಗಣಕೀಕೃತ ಸೀಟು ಹಂಚಿಕೆಯನ್ನು ಮಾಡುವುದಾಗಿರುತ್ತದೆ. ಈ ಕಾರ್ಯವು ಸಿ.ಇ.ಟಿ ಘಟಕದಲ್ಲಿ ವರ್ಷದ ಅಲ್ಪ ಸಮಯವನ್ನು ಮಾತ್ರ ತೆಗೆದುಕೊಂಡಿರುತ್ತದೆ. ಆದ್ದರಿಂದ ಸರ್ಕಾರವು ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕವನ್ನು ಸ್ವಾಯತ್ತ ಸಂಸ್ಥೆಯನ್ನಾಗಿ ಮಾರ್ಪಡಿಸಿ ಸರ್ಕಾರದ ಹಾಗೂ ಖಾಸಗಿ ವಿಭಾಗದ ಇತರೆ ಪರೀಕ್ಷೆಗಳನ್ನು ಆಯೋಜಿಸಲು ಬಳಸಿಕೊಳ್ಳಲು ನಿರ್ಧರಿಸಿ ಇದನ್ನು ಕರ್ನಾಟಕ ಪರೀಕ್ಷೆಗಳ ಪ್ರಾಧಿಕಾರ (Karnataka Examinations Authority) ಎಂಬ ಹೆಸರಿನಲ್ಲಿ ನೋಂದಾಯಿತ ಸೊಸೈಟಿಯನ್ನಾಗಿ ಪರಿವರ್ತಿಸಲು ಮಂಜೂರಾತಿ ನೀಡಿ ಇದನ್ನು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರಡಿಯಲ್ಲಿ ನೋಂದಾಯಿಸಲು ಹಾಗೂ ಪ್ರಾಧಿಕಾರದ ಆಡಳಿತ ಮಂಡಳಿ (ಗೌರ್ನಿಂಗ್ ಕೌನ್ಸಿಲ್) ಗೆ ಅಧ್ಯಕ್ಷರು ಹಾಗೂ ಇತರೆ 17 ಸದಸ್ಯರನ್ನು ನೇಮಕ ಮಾಡಿ ಮೇಲೆ ಓದಲಾದ ಆದೇಶದಲ್ಲಿ ಮಂಜೂರಾತಿ ನೀಡಲಾಗಿತ್ತು.

ಆದರೆ, ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕವನ್ನು ಕರ್ನಾಟಕ ಪರೀಕ್ಷೆಗಳ ಪ್ರಾಧಿಕಾರವನ್ನಾಗಿ ಕೆಲವೊಂದು ಕಾರಣಾಂತರಗಳಿಂದ ನೋಂದಾಯಿಸಲಾಗಿರುವುದಿಲ್ಲ. ಆದುದರಿಂದ ದಿ:20-12-2006ರ ಆದೇಶದಲ್ಲಿ ರಚಿಸಲಾಗಿದ್ದ ಪ್ರಾಧಿಕಾರದ ಆಡಳಿತ ಮಂಡಳಿ (ಗೌರ್ನಿಂಗ್ ಕೌನ್ಸಿಲ್) ಯನ್ನು ಪುನರ್ ರಚಿಸಲು ಸರ್ಕಾರವು ತೀರ್ಮಾನಿಸಿದ್ದು ಅದರಂತೆ ಈ ಆದೇಶ.

<u>**ಸರ್ಕಾರದ ಆದೇಶ ಸಂಖ್ಯೆ: ಇಡಿ 212 ಟಿಇಸಿ 200**</u>
<u>**ಬೆಂಗಳೂರು, ದಿನಾಂಕ:25ನೇ ಜುಲೈ 2007.**</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಕರ್ನಾಟಕ ಪರೀಕ್ಷೆಗಳ ಪ್ರಾಧಿಕಾರದ ಆಡಳಿತ ಮಂಡಳಿ (ಗೌರ್ನಿಂಗ್ ಕೌನ್ಸಿಲ್) ಯನ್ನು ಈ ಕೆಳಕಂಡಂತೆ ಪುನರ್ ರಚಿಸಲಾಗಿದೆ.

| | | | |
|---|---|---|---|
| (1) | ಮಾನ್ಯ ಉನ್ನತ ಶಿಕ್ಷಣ ಸಚಿವರು | - | ಅಧ್ಯಕ್ಷರು(Chairperson) |
| (2) | ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು | - | ಸಹ ಅಧ್ಯಕ್ಷರು (Vice Chairperson) |
| (3) | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ | - | ಉಪಾಧ್ಯಕ್ಷರು (Deputy Charperson) (ಕ್ರ.ಸಂ 1 ಅಥವಾ 2ರ ಅನುಪಸ್ಥಿತಿಯಲ್ಲಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುವರು) |
| (4) | ಸರ್ಕಾರದ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ | - | ಸದಸ್ಯರು |

(5) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ - ಸದಸ್ಯರು

(6) ಉಪ ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ - ಸದಸ್ಯರು

(7) ಉಪ ಕುಲಪತಿಗಳು, ರಾಜೀವ್‌ಗಾಂಧಿ ಆರೋಗ್ಯ ಮತ್ತು ವಿಜ್ಞಾನ ವಿಶ್ವವಿದ್ಯಾಲಯ, ಬೆಂಗಳೂರು. - ಸದಸ್ಯರು

(8) ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ - ಸದಸ್ಯರು

(9) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ - ಸದಸ್ಯರು

(10) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ - ಸದಸ್ಯರು

(11) ಕಾಮೆಡ್-ಕೆ ನಾಮನಿರ್ದೇಶಿಸಲ್ಪಡುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಸಂಘದ ಪ್ರತಿನಿಧಿ. - ಸದಸ್ಯರು

(12) ಕಾಮೆಡ್-ಕೆ ನಾಮನಿರ್ದೇಶಿಸಲ್ಪಡುವ ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಘದ ಪ್ರತಿನಿಧಿ. ಸದಸ್ಯರು

(13) ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಾಮ ನಿರ್ದೇಶಿಸಲ್ಪಡುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಪ್ರತಿನಿಧಿ. - ಸದಸ್ಯರು

(14) ಅಲ್ಪಸಂಖ್ಯಾತರ ಸಂಸ್ಥೆಗಳಿಂದ ನಾಮ ನಿರ್ದೇಶಿಸಲ್ಪಡುವ ಖಾಸಗಿ ವೈದ್ಯಕೀಯ ಕಾಲೇಜುಗಳ ಪ್ರತಿನಿಧಿ. - ಸದಸ್ಯರು

(15) ಕಾನ್‌ಫೆಡರೇಷನ್ ಆಫ್ ಇಂಡಿಯನ್ ಇಂಡಸ್ಟ್ರೀಸ್ (ಸಿ.ಐ.ಐ.) ಯಿಂದ ನಾಮನಿರ್ದೇಶಿತ ಪ್ರತಿನಿಧಿ - ಸದಸ್ಯರು

(16) ವಿಶೇಷಾಧಿಕಾರಿ (ಕಾರ್ಯಕಾರಿ ನಿರ್ದೇಶಕರು), ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕ, - ಸದಸ್ಯ ಕಾರ್ಯದರ್ಶಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಪಿ.ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು - ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 200 ಪ್ರತಿಗಳನ್ನು ಶಿಕ್ಷಣ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ.
2. ಸರ್ಕಾರದ ಕಾರ್ಯದರ್ಶಿ (ವೈದ್ಯಕೀಯ ಶಿಕ್ಷಣ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ.
4. ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.
5. ಸರ್ಕಾರದ ಕಾರ್ಯದರ್ಶಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ.
6. ಸರ್ಕಾರದ ಕಾರ್ಯದರ್ಶಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಶಿಕ್ಷಣ ಇಲಾಖೆ.

7. ಸರ್ಕಾರದ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ.
8. ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ.
9. ಉಪ ಕುಲಪತಿಗಳು, ರಾಜೀವ್‌ಗಾಂಧಿ ಆರೋಗ್ಯ ಮತ್ತು ವಿಜ್ಞಾನ ವಿಶ್ವವಿದ್ಯಾಲಯ, ಬೆಂ.
10. ಉಪ ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾಂ.
11. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
12. ಪ್ರಾದೇಶಿಕ ಅಧಿಕಾರಿ, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್, ಬೆಂಗಳೂರು ವಿಶ್ವವಿದ್ಯಾಲಯ ಆವರಣ, ಅರಮನೆ ರಸ್ತೆ, ಬೆಂಗಳೂರು-1.
13. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
14. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
15. ನಿರ್ದೇಶಕರು, ಭಾರತೀಯ ವೈದ್ಯ ಪದ್ಧತಿ ನಿರ್ದೇಶನಾಲಯ, ಬೆಂಗಳೂರು.
16. ಎಲ್ಲಾ ವಿಶ್ವವಿದ್ಯಾಲಯಗಳ ರಿಜಿಸ್ಟ್ರಾರ್‌ಗಳಿಗೆ.
17. ಅಧ್ಯಕ್ಷರು, ಕಾಮೆಡ್-ಕೆ, ರಮಣಶ್ರೀ ಚೇಂಬರ್ಸ್, ಬೋರಿಂಗ್ ಮತ್ತು ಲೇಡಿಕರ್ಜನ್ ಆಸ್ಪತ್ರೆ ಎದುರು, ಶಿವಾಜಿನಗರ, ಬೆಂಗಳೂರು.
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಮತೀಯ ಅಲ್ಪಸಂಖ್ಯಾತ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸಂಘ, ನಂ.143, ಸೂರ್ಯಮುಖಿ ಅಪಾರ್ಟ್‌ಮೆಂಟ್ಸ್, 4ನೇ ಮಹಡಿ, ವಿಟ್ಟಲ್ ಮಲ್ಯ ರಸ್ತೆ, ಬೆಂಗಳೂರು.
19. ಶ್ರೀ ಎನ್.ಕೆ.ಪಾಂಡುರಂಗ ಶೆಟ್ಟಿ, ಅಧ್ಯಕ್ಷರು, ಕರ್ನಾಟಕ ಖಾಸಗಿ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ ಸಂಘ, ಬೆಂಗಳೂರು.
20. ಡಾ:ಹೇಮಚಂದ್ರಸಾಗರ್, ಕಾರ್ಯದರ್ಶಿಗಳು, ಕರ್ನಾಟಕ ಖಾಸಗಿ ಅನುದಾನರಹಿತ ಇಂಜಿನಿಯರಿಂಗ್ ಕಾಲೇಜುಗಳ ಸಂಘ, ಬೆಂಗಳೂರು.
21. ರಾಜ್ಯದಲ್ಲಿನ ಎಲ್ಲಾ ವೃತ್ತಿಪರ ಇಂಜಿನಿಯರಿಂಗ್, ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
22. ಅಧ್ಯಕ್ಷರು, ಕಾನ್‌ಫೆಡರೇಷನ್ ಆಫ್ ಇಂಡಿಯನ್ ಇಂಡಸ್ಟ್ರೀಸ್ (ಸಿ.ಐ.ಐ.), ಬೆಂಗಳೂರು.
23. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ವಿಶೇಷಾಧಿಕಾರಿಗಳು, ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
24. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
25. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
26. ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
27. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
28. ಮಾನ್ಯ ವಿಧಾನ ಸಭಾಧ್ಯಕ್ಷರ ಆಪ್ತ ಕಾರ್ಯದರ್ಶಿಗಳಿಗೆ, ವಿಧಾನ ಸೌಧ, ಬೆಂಗಳೂರು.
29. ಮಾನ್ಯ ವಿಧಾನ ಪರಿಷತ್ತಿನ ಸಭಾಪತಿಗಳ ಆಪ್ತ ಕಾರ್ಯದರ್ಶಿಗಳಿಗೆ, ವಿಧಾನ ಸೌಧ, ಬೆಂಗಳೂರು.
30. ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ, ವಿಧಾನ ಸೌಧ / ವಿಕಾಸ ಸೌಧ, ಬೆಂಗಳೂರು.
31. ಮಾನ್ಯ ವಿರೋಧ ಪಕ್ಷದ ನಾಯಕರು, ವಿಧಾನ ಸಭೆ ಇವರ ಆಪ್ತ ಕಾರ್ಯದರ್ಶಿಗಳಿಗೆ, ವಿಧಾನ ಸೌಧ, ಬೆಂಗಳೂರು.
32. ಮಾನ್ಯ ವಿರೋಧ ಪಕ್ಷದ ನಾಯಕರು, ವಿಧಾನ ಪರಿಷತ್ ಇವರ ಆಪ್ತ ಕಾರ್ಯದರ್ಶಿಗಳಿಗೆ, ವಿಧಾನ ಸೌಧ, ಬೆಂಗಳೂರು.
33. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
34. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
35. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು ರವರ ಆಪ್ತ ಕಾರ್ಯದರ್ಶಿಗಳಿಗೆ.
36. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ.